All India Radio: Bangalore
National Bulletin In Kannada

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

23.06.2026 19.35 hrs

---

ಮುಖ್ಯಾಂಶಗಳು

೧. ೬೫ ಸಾಧಕರಿಗೆ ಪದ್ಮ ಪ್ರಶಸ್ತಿ ಪ್ರದಾನ ಮಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಕರ್ನಾಟಕದ ಐವರು ಗಣ್ಯರಿಗೆ ಪದ್ಮ ಗೌರವ

೨. ನಾಗರಿಕ ದೇವೋ ಭವ ತತ್ವದಡಿ ಆಡಳಿತ ನಡೆಸಲು ಅಧಿಕಾರಿಗಳಿಗೆ ಕರೆ ನೀಡಿದ ಪ್ರಧಾನಿ ನರೇಂದ್ರ ಮೋದಿ

೩. ಪರ್ಶಿಯನ್ ಕೊಲ್ಲಿಯಲ್ಲಿ ೧೦ ಭಾರತಿಯ ಹಡಗುಗಳು ಇರುವುದನ್ನು ಖಚಿತಪಡಿಸಿದ ವಿದೇಶಾಂಗ ಸಚಿವಾಲಯ; ಶೀಘ್ರದಲ್ಲೇ ಹರ್ಮುಜ್ ಜಲಸಂಧಿ ದಾಟುವ ವಿಶ್ವಾಸ

೪. ಎಲ್ ನಿನೊ ಎದುರಿಸಲು ಮುನ್ನೆಚ್ಚರಿಕಾ ಕ್ರಮ; ರೈತರ ನೆರವಿಗೆ ಸರ್ಕಾರದಿಂದ ಅಗತ್ಯ ಸಿದ್ಧತೆ - ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್

೫. ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವ ಶೂಟಿಂಗ್ ಚಾಂಪಿಯನ್‌ಶಿಪ್; ಇಂದು ಭಾರತದ ಕೊರಳಿಗೆ ಮೂರು ಪದಕ

---

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಇಂದು ಸಂಜೆ ಆಯೋಜಿಸಲಾಗಿದ್ದ ಎರಡನೇ ನಾಗರಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಗಣ್ಯರಿಗೆ ಪದ್ಮ ಪ್ರಶಸ್ತಿಗಳನ್ನು ವಿತರಿಸಿದರು. ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿನ ಅಪಾರ ಕೊಡುಗೆಗಾಗಿ ಹಿರಿಯ ಪತ್ರಕರ್ತ ಪಿ. ನಾರಾಯಣನ್ ಹಾಗೂ ಸಮಾಜ ಸೇವೆಗಾಗಿ ನಿವೃತ್ತ ನ್ಯಾಯಮೂರ್ತಿ ಕೆ.ಟಿ. ಥಾಮಸ್ ಅವರಿಗೆ ದೇಶದ ಎರಡನೇ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ಪದ್ಮವಿಭೂಷಣ' ನೀಡಿ ಗೌರವಿಸಲಾಯಿತು. ಇದೇ ವೇಳೆ ಮಾಜಿ ಟೆನಿಸ್ ಆಟಗಾರ ವಿಜಯ್ ಅಮೃತರಾಜ್, ಹಿರಿಯ ನಟ ಮಮ್ಮುಟ್ಟಿ ಹಾಗೂ ಖ್ಯಾತ ಹಿನ್ನೆಲೆ ಗಾಯಕಿ ಅಲ್ಕಾ ಯಾಗ್ನಿಕ್ ಅವರಿಗೆ 'ಪದ್ಮಭೂಷಣ' ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕರ್ನಾಟಕದ ಸಾಧಕರಾದ ಡಾ.ಸುರೇಶ್ ಹನಗವಾಡಿ, ಡಾ. ಶುಭಾ ವೆಂಕಟೇಶ ಅಯ್ಯಂಗಾರ್, ಡಾ.ಪ್ರಭಾಕರ್ ಕೋರೆ ಅವರಿಗೆ ಪದ್ಮಶ್ರೀ ಪ್ರಶಸ್ತಿ ಪ್ರದಾನ ಮಾಡಲಾಯಿತು. ಮರಣೋತ್ತರವಾಗಿ ಟಿ.ಟಿ.ಜಗನ್ನಾಥನ್ ಅವರಿಗೆ ಘೋಷಿಸಲಾದ ಪದ್ಮಶ್ರೀ ಪ್ರಶಸ್ತಿಯನ್ನು ಅವರ ಪರವಾಗಿ ಅವರ ಪುತ್ರ ಮುಕುಂದ್ ಸ್ವೀಕರಿಸಿದರು. ಇಂದು ನಡೆದ ಸಮಾರಂಭದಲ್ಲಿ ಎರಡು ಪದ್ಮವಿಭೂಷಣ, ಏಳು ಪದ್ಮಭೂಷಣ ಮತ್ತು ೫೬ ಪದ್ಮಶ್ರೀ ಸೇರಿದಂತೆ ೬೫ ಪದ್ಮ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.

ಕೇಂದ್ರ ಸರ್ಕಾರವು ಈ ಸಾಲಿನಲ್ಲಿ ಒಟ್ಟು ೧೩೧ ಪದ್ಮ ಪ್ರಶಸ್ತಿಗಳನ್ನು ಘೋಷಿಸಿತ್ತು. ಇದರಲ್ಲಿ ಐದು ಪದ್ಮವಿಭೂಷಣ, ೧೩ ಪದ್ಮಭೂಷಣ ಹಾಗೂ ೧೧೩ ಪದ್ಮಶ್ರೀ ಪ್ರಶಸ್ತಿಗಳು ಒಳಗೊಂಡಿವೆ.

---

ಸಾರ್ವಜನಿಕ ಆಡಳಿತದಲ್ಲಿ 'ನಾಗರಿಕ ದೇವೋ ಭವ' ತತ್ವವನ್ನು ಅಳವಡಿಸಿಕೊಳ್ಳಬೇಕು ಮತ್ತು ಪ್ರತಿಯೊಬ್ಬ ಅಧಿಕಾರಿಯೂ ನಾಗರಿಕರನ್ನೇ ಆಡಳಿತದ ಕೇಂದ್ರಬಿಂದುವನ್ನಾಗಿ ಇಟ್ಟುಕೊಂಡು ಕೆಲಸ ಮಾಡಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಕರೆ ನೀಡಿದ್ದಾರೆ.

ನವದೆಹಲಿಯಲ್ಲಿ ಇಂದು ೨೦೨೪ರ ಬ್ಯಾಚ್‌ನ ೧೮೩ ಐಎಎಸ್ ಪ್ರೊಬೇಷನರಿ ಅಧಿಕಾರಿಗಳೊಂದಿಗೆ ಸಂವಾದ ನಡೆಸಿದ ಪ್ರಧಾನಿಯವರು, 'ವಿಕಸಿತ ಭಾರತ@೨೦೪೭' ರತ್ತ ದೇಶದ ಪಯಣವನ್ನು ಮುನ್ನಡೆಸಲು ಯುವ ನಾಗರಿಕ ಸೇವಕರು ಸನ್ನದ್ಧರಾಗಬೇಕು ಎಂದು ಆಶಿಸಿದರು.

ಯುವ ಅಧಿಕಾರಿಗಳು ದೃಢ ಸಂಕಲ್ಪ ಮತ್ತು ಜನಕೇಂದ್ರಿತ ಆಡಳಿತದ ಮೂಲಕ ದೇಶ ನಿರ್ಮಾಣಕ್ಕೆ ತಮ್ಮನ್ನು ತಾವು ಸಮರ್ಪಿಸಿಕೊಳ್ಳಬೇಕು ಎಂದ ಪ್ರಧಾನಿ, ಸರ್ಕಾರದ ಸಮಗ್ರ ಹೆಜ್ಜೆಯ ಅಗತ್ಯವನ್ನು ಪ್ರತಿಪಾದಿಸಿದರು. ಇಲಾಖೆಗಳ ನಡುವಿನ ಪರಿಣಾಮಕಾರಿ ಸಮನ್ವಯದಿಂದ ಮಾತ್ರ ದೀರ್ಘಕಾಲೀನ ಫಲಿತಾಂಶಗಳನ್ನು ಸಾಧಿಸಲು ಸಾಧ್ಯ ಎಂದು ಅವರು ತಿಳಿಸಿದರು.

ಮುಂಬರುವ ದಶಕಗಳ ಪ್ರತಿಯೊಂದು ನಿರ್ಧಾರವೂ ಆತ್ಮನಿರ್ಭರ ಭಾರತ, ಮೇಕ್ ಇನ್ ಇಂಡಿಯಾ ಮತ್ತು ಯುವಜನರಿಗೆ ಅವಕಾಶಗಳ ಸೃಷ್ಟಿಗೆ ಪೂರಕವಾಗಿರಬೇಕು ಎಂದು ಒತ್ತಿ ಹೇಳಿದ ಅವರು, ಪ್ರಸ್ತುತ ಐಎಎಸ್ ಬ್ಯಾಚ್‌ನಲ್ಲಿ ಶೇಕಡಾ ೪೦ ಕ್ಕಿಂತ ಹೆಚ್ಚು ಮಹಿಳಾ ಅಧಿಕಾರಿಗಳಿರುವುದರ ಕುರಿತು ಶ್ಲಾಘನೆ ವ್ಯಕ್ತಪಡಿಸಿದರು.

---

ಪರ್ಷಿಯನ್ ಗಲ್ಫ್ ಪ್ರದೇಶದಲ್ಲಿ ಪ್ರಸ್ತುತ ೧೦ ಭಾರತೀಯ ಹಡಗುಗಳು ಉಳಿದುಕೊಂಡಿದ್ದು, ಶೀಘ್ರದಲ್ಲೇ ಹಾರ್ಮುಜ್ ಜಲಸಂಧಿ ದಾಟುವ ವಿಶ್ವಾಸವಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

ಇಂದು ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚಿನ ಕತಾರ್ ಸ್ಫೋಟದಲ್ಲಿ ೧೨ ಭಾರತೀಯರು ಸಾವನ್ನಪ್ಪಿದ್ದು, ೬೬ ಮಂದಿ ಗಾಯಗೊಂಡಿದ್ದಾರೆ; ಮೃತರ ಪಾರ್ಥಿವ ಶರೀರಗಳನ್ನು ತಾಯ್ನಾಡಿಗೆ ತರಲು ಕತಾರ್ ಸರ್ಕಾರದೊಂದಿಗೆ ಸಮನ್ವಯ ಸಾಧಿಸಲಾಗುತ್ತಿದೆ ಎಂದರು.

ಇನ್ನು ಪಿಒಕೆ ಅಶಾಂತಿಗೆ ಭಾರತವನ್ನು ಹೊಣೆ ಮಾಡಿರುವ ಪಾಕಿಸ್ತಾನದ ಆರೋಪವನ್ನು ತಳ್ಳಿಹಾಕಿದ ಅವರು, ಇದು ಪಾಕಿಸ್ತಾನದ ದಶಕಗಳ ಶೋಷಣೆಯ ಫಲವಾಗಿದ್ದು, ಅಲ್ಲಿನ ಮಾನವ ಹಕ್ಕುಗಳ ಉಲ್ಲಂಘನೆಗೆ ಜಾಗತಿಕ ಸಮುದಾಯವು ಪಾಕಿಸ್ತಾನವನ್ನು ಹೊಣೆಗಾರನನ್ನಾಗಿ ಮಾಡಬೇಕು ಎಂದು ಆಗ್ರಹಿಸಿದರು.

ಬ್ರಿಕ್ಸ್ ರಾಷ್ಟ್ರೀಯ ಭದ್ರತಾ ಸಲಹೆಗಾರರ ಸಭೆಯ ಹಿನ್ನೆಲೆಯಲ್ಲಿ ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಇರಾನ್, ಚೀನಾ, ಬ್ರೆಜಿಲ್ ಸೇರಿದಂತೆ ವಿವಿಧ ದೇಶಗಳ ಭದ್ರತಾ ಮುಖ್ಯಸ್ಥರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿ ಜಾಗತಿಕ ಸವಾಲುಗಳ ಕುರಿತು ಚರ್ಚಿಸಿದ್ದಾರೆ ಎಂದು ರಣಧೀರ್ ಜೈಸ್ವಾಲ್ ತಿಳಿಸಿದರು.

ಇದೇ ವೇಳೆ, ಭಾರತ-ಯುಎಇ ರಕ್ಷಣಾ ಪಾಲುದಾರಿಕೆ ಬಲಗೊಳ್ಳುತ್ತಿರುವುದನ್ನು ಶ್ಲಾಘಿಸಿದ ಅವರು, ಬಾಂಗ್ಲಾದೇಶದಲ್ಲಿ ದೇವತಾ ಮೂರ್ತಿಗಳ ಅಪವಿತ್ರೀಕರಣದ ವರದಿಗಳ ಬೆನ್ನಲ್ಲೇ, ಅಲ್ಲಿನ ಅಲ್ಪಸಂಖ್ಯಾತ ಸಮುದಾಯದ ಸುರಕ್ಷತೆಯನ್ನು ಖಾತರಿಪಡಿಸಬೇಕೆಂದು ಬಾಂಗ್ಲಾದೇಶ ಸರ್ಕಾರಕ್ಕೆ ಭಾರತ ಕರೆ ನೀಡಿದೆ ಎಂದು ಸ್ಪಷ್ಟಪಡಿಸಿದರು.

---

೩೭೦ನೇ ವಿಧಿಯ ರದ್ದತಿಯೊಂದಿಗೆ ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ಅಖಂಡ ಭಾರತದ ಕನಸು ನನಸಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ.

ನವದೆಹಲಿಯಲ್ಲಿಂದು 'ನಾಫೆಡ್' ಸಂಸ್ಥೆಯ ನೂತನ ಹರಾಜು ಪೋರ್ಟಲ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ದೇಶದ ಏಕತೆಗಾಗಿ ಪ್ರಾಣತ್ಯಾಗ ಮಾಡಿದ ಮುಖರ್ಜಿ ಅವರ ಕೊಡುಗೆಯನ್ನು ಸ್ಮರಿಸಿದರು.

ಇದೇ ವೇಳೆ, ಕೃಷಿ ಖರೀದಿಯಲ್ಲಿ ಮಧ್ಯವರ್ತಿಗಳ ಹಾವಳಿ ತಪ್ಪಿಸಿ, ರೈತರಿಗೆ ನೇರವಾಗಿ ಕನಿಷ್ಠ ಬೆಂಬಲ ಬೆಲೆ ತಲುಪಿಸಲು ಕರೆ ನೀಡಿದ ಅವರು, ೧೨ ವರ್ಷಗಳ ಹಿಂದೆ ಸಂಕಷ್ಟದಲ್ಲಿದ್ದ ನಫೆಡ್ ಇಂದು ೭೪ ಲಕ್ಷ ರೈತರಿಗೆ ನೆರವಾಗುತ್ತಾ ೩೦ ಸಾವಿರ ಕೋಟಿ ರೂ. ವಹಿವಾಟು ನಡೆಸುವ ಬಲಿಷ್ಠ ಸಂಸ್ಥೆಯಾಗಿ ಬೆಳೆದಿದೆ ಎಂದರು.

ಸಚಿವರು ರೈತರ ಮಕ್ಕಳಿಗಾಗಿ 'ನಫೆಡ್-ಕಲ್ಯಾಣ್' ವಿದ್ಯಾರ್ಥಿವೇತನ ಹಾಗೂ ದಾಸ್ತಾನು ನಿರ್ವಹಣೆಯ 'ದೃಷ್ಟಿ' ಪೋರ್ಟಲ್ ಸೇರಿದಂತೆ ಹಲವು ಡಿಜಿಟಲ್ ಉಪಕ್ರಮಗಳನ್ನು ಬಿಡುಗಡೆ ಮಾಡಿದರು.

ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾತನಾಡಿ, ಕಳೆದ ಒಂದು ದಶಕದಲ್ಲಿ ಕೃಷಿ ಉತ್ಪಾದನೆ ಗಣನೀಯವಾಗಿ ಹೆಚ್ಚಿದೆ. ಈ ಪೋರ್ಟಲ್ ಮೂಲಕ ರೈತರು ಬೆಳೆ ಮಾರಾಟ ಮಾಡಿದ ೪೮ ಗಂಟೆಗಳ ಒಳಗಾಗಿ ಹಣವನ್ನು ನೇರವಾಗಿ ತಮ್ಮ ಬ್ಯಾಂಕ್ ಖಾತೆಗಳಿಗೆ ಪಡೆಯಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

---

ಎಲ್ ನಿನೊ ಅಭಾವದಿಂದ ಉಂಟಾಗಬಹುದಾದ ದುರ್ಬಲ ಮುಂಗಾರು ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ಹಾಗೂ ರೈತರಿಗೆ ನೆರವಾಗಲು ಸರ್ಕಾರ ಎಲ್ಲಾ ರೀತಿಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಜಂಟಿ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶದಲ್ಲಿ ಇದುವರೆಗೆ ಶೇಕಡ ೪೩ ರಷ್ಟು ಕಡಿಮೆ ಮಳೆಯಾಗಿದ್ದು, ಜುಲೈ ತಿಂಗಳಲ್ಲೂ ಮುಂಗಾರು ದುರ್ಬಲವಾಗಿರುವ ಸಾಧ್ಯತೆ ಇದೆ. ದೇಶದ ಸುಮಾರು ೩೧೫ ಜಿಲ್ಲೆಗಳಲ್ಲಿ ವಾಡಿಕೆಗಿಂತ ಕಡಿಮೆ ಮಳೆಯಾಗುವ ಆತಂಕವಿದೆ ಎಂದರು.

ಈ ಪರಿಸ್ಥಿತಿ ನಿಭಾಯಿಸಲು ಕಡಿಮೆ ನೀರು ಬೇಕಾಗುವ ಬೇಳೆ-ಕಾಳುಗಳು, ಸಿರಿಧಾನ್ಯಗಳು ಮತ್ತು ಎಣ್ಣೆಕಾಳುಗಳ ಕೃಷಿಗೆ ಹೆಚ್ಚಿನ ಪ್ರೋತ್ಸಾಹ ನೀಡುವಂತೆ ರಾಜ್ಯ ಸರ್ಕಾರಗಳಿಗೆ ಸಲಹೆ ನೀಡಲಾಗಿದೆ ಎಂದರು.

---

ಭಾರತ ಮತ್ತು ಅಮೆರಿಕ ನಡುವಿನ ವ್ಯಾಪಾರ ಒಪ್ಪಂದವನ್ನು ಪುನರ್‌ರೂಪಿಸಲು ಹಾಗೂ ಮುಂದುವರಿಸಲು ಉನ್ನತ ಮಟ್ಟದ ವ್ಯಾಪಾರ ಮಾತುಕತೆಗಳು ಇಂದು ಆರಂಭಗೊಂಡಿವೆ. ಅಮೆರಿಕದ ಸುಂಕ ನೀತಿಯಲ್ಲಿ ಆಗಿರುವ ಬದಲಾವಣೆಗಳಿಂದಾಗಿ ಈ ವರ್ಷದ ಆರಂಭದಲ್ಲಿ ರೂಪುಗೊಂಡಿದ್ದ ಒಪ್ಪಂದದ ಚೌಕಟ್ಟಿಗೆ ಅಡಚಣೆ ಉಂಟಾದ ಹಿನ್ನೆಲೆಯಲ್ಲಿ, ಎರಡೂ ರಾಷ್ಟ್ರಗಳು ಹೊಸದಾಗಿ ಮಾತುಕತೆ ನಡೆಸುತ್ತಿವೆ.

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಅವರು ನವದೆಹಲಿಯಲ್ಲಿ ಅಮೆರಿಕದ ವ್ಯಾಪಾರ ಪ್ರತಿನಿಧಿ ಜೇಮಿಸನ್ ಗ್ರೀಯರ್ ಹಾಗೂ ಭಾರತದಲ್ಲಿನ ಅಮೆರಿಕ ರಾಯಭಾರಿ ಸರ್ಗಿಯೋ ಗಾರ್ ಅವರೊಂದಿಗೆ ಸಭೆ ನಡೆಸಿದರು.

ಅಮೆರಿಕವು ತನ್ನ ವ್ಯಾಪಾರ ಪಾಲುದಾರ ರಾಷ್ಟ್ರಗಳಿಂದ ಆಗಮಿಸುವ ಆಮದುಗಳ ಮೇಲೆ ವಿಧಿಸಿರುವ ತಾತ್ಕಾಲಿಕ ಶೇಕಡಾ ೧೦ರ ಸುಂಕದ ಆದೇಶ, ಜುಲೈ ೨೪ರಂದು ಅಂತ್ಯಗೊಳ್ಳಲಿರುವ ಹಿನ್ನೆಲೆಯಲ್ಲಿ, ಅದಕ್ಕೂ ಮುನ್ನ ಮಧ್ಯಂತರ ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸುವ ಗುರಿಯನ್ನು ಉಭಯ ದೇಶಗಳು ಹೊಂದಿವೆ.

---

ಅಯೋಧ್ಯೆಯ ರಾಮಮಂದಿರದಲ್ಲಿ ಭಕ್ತರು ನೀಡಿದ ದೇಣಿಗೆ ಹಾಗೂ ಕಾಣಿಕೆಗಳ ನಿರ್ವಹಣೆಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಕುರಿತು ತನಿಖೆ ನಡೆಸುತ್ತಿರುವ ಮೂರು ಸದಸ್ಯರ ವಿಶೇಷ ತನಿಖಾ ತಂಡ ಎಸ್‌ಐಟಿ ಇಂದು ತನ್ನ ಪ್ರಾಥಮಿಕ ತನಿಖಾ ವರದಿಯನ್ನು ಸಲ್ಲಿಸಿದೆ.

ಲಖನೌ ಆಯುಕ್ತ ಹಾಗೂ ಎಸ್‌ಐಟಿ ಮುಖ್ಯಸ್ಥ ವಿಜಯ್ ವಿಶ್ವಾಸ್ ಪಂತ್ ಅವರು, ಗೃಹ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಸಂಜಯ್ ಪ್ರಸಾದ್ ಅವರಿಗೆ ವರದಿ ಸಲ್ಲಿಸಿದರು. ವರದಿ ಸಲ್ಲಿಸಿದ ಬಳಿಕ ಮಾತನಾಡಿದ ವಿಜಯ್ ವಿಶ್ವಾಸ್ ಪಂತ್, ಇದು ಪ್ರಾಥಮಿಕ ತನಿಖಾ ವರದಿಯಾಗಿದ್ದು, ತನಿಖೆ ಇನ್ನೂ ಮುಂದುವರಿದಿದೆ ಎಂದು ತಿಳಿಸಿದ್ದಾರೆ.

ದೇಣಿಗೆ ಹಣದ ದುರ್ಬಳಕೆ ಮತ್ತು ಹಣಕಾಸು ಅಕ್ರಮಗಳ ಆರೋಪಗಳ ಕುರಿತು ತನಿಖೆ ನಡೆಸಲು ಉತ್ತರ ಪ್ರದೇಶ ಸರ್ಕಾರ ಈ ಉನ್ನತ ಮಟ್ಟದ ಸಮಿತಿಯನ್ನು ರಚಿಸಿತ್ತು. ತನಿಖೆಯ ಪ್ರಾಥಮಿಕ ಹಂತದಲ್ಲಿ ನಡೆದ ಪರಿಶೀಲನೆಗಳ ವಿವರಗಳನ್ನು ಎಸ್‌ಐಟಿ ತನ್ನ ವರದಿಯಲ್ಲಿ ಸಲ್ಲಿಸಿದೆ.

---

೧೯೯೩ರ ಕೊಲ್ಕತ್ತಾ ಬೊಬಜಾರ್ ಬಾಂಬ್ ಸ್ಫೋಟ ಪ್ರಕರಣದ ಪ್ರಮುಖ ಸಂಚುಕೋರ ಜೀವಾವಧಿ ಶಿಕ್ಷೆಗೊಳಗಾದ ಅಪರಾಧಿ ೭೭ ವರ್ಷದ ಮೊಹಮ್ಮದ್ ರಶೀದ್ ಖಾನ್‌ನನ್ನು ಅವಧಿಗೂ ಮುನ್ನ ಬಿಡುಗಡೆ ಮಾಡುವಂತೆ ದೆಹಲಿ ಹೈಕೋರ್ಟ್ ನೀಡಿದ್ದ ಆದೇಶಕ್ಕೆ ಸುಪ್ರೀಂಕೋರ್ಟ್ ಇಂದು ತಡೆ ನೀಡಿದೆ.

ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ, ಪಶ್ಚಿಮ ಬಂಗಾಳ ಸರ್ಕಾರ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಪಿ.ಕೆ.ಮಿಶ್ರಾ ಮತ್ತು ಸಂಜೀವ್ ಸಚ್ಚದೇವ್ ಅವರಿದ್ದ ಪೀಠ ಈ ಮಧ್ಯಂತರ ಆದೇಶ ಹೊರಡಿಸಿ, ಶಿಕ್ಷೆಗೊಳಗಾಗಿರುವ ರಶೀದ್ ಖಾನ್‌ಗೆ ನೋಟಿಸ್ ಜಾರಿ ಮಾಡಿದೆ.

---

ಜರ್ಮನಿಯ ಸುಹ್ಲ್‌ನಲ್ಲಿ ನಡೆಯುತ್ತಿರುವ ಐಎಸ್‌ಎಸ್‌ಎಫ್ ಜೂನಿಯರ್ ವಿಶ್ವ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಶೂಟರ್‌ಗಳು ಇಂದು ಎರಡು ಬೆಳ್ಳಿ ಹಾಗೂ ಒಂದು ಕಂಚಿನ ಪದಕ ಗೆದ್ದಿದ್ದಾರೆ. ಪುರುಷರ ೧೦ ಮೀಟರ್ ಏರ್ ಪಿಸ್ತೂಲ್ ಜೂನಿಯರ್ ವೈಯಕ್ತಿಕ ವಿಭಾಗದಲ್ಲಿ ಶಿವ ನರ್ವಾಲ್ ಬೆಳ್ಳಿ ಹಾಗೂ ಯುಗ್ ಪ್ರತಾಪ್ ಸಿಂಗ್ ರಾಥೋಡ್ ಕಂಚಿನ ಪದಕ ಗೆದ್ದರು.

ಇದರ ಜೊತೆಗೆ ಪುರುಷರ ೧೦ ಮೀಟರ್ ಏರ್ ಪಿಸ್ತೂಲ್ ಜೂನಿಯರ್ ತಂಡ ವಿಭಾಗದಲ್ಲಿ ಶಿವ ನರ್ವಾಲ್, ಸಂದೀಪ್ ಬಿಷ್ಣೋಯ್ ಮತ್ತು ಚಿರಾಗ್ ಶರ್ಮಾ ಅವರ ತಂಡ ದೇಶಕ್ಕೆ ಬೆಳ್ಳಿ ಪದಕ ತಂದುಕೊಟ್ಟಿತು. ೫ ಚಿನ್ನ, ೩ ಬೆಳ್ಳಿ, ೭ ಕಂಚು ಪದಕಗಳೊಂದಿಗೆ ಭಾರತದ ಒಟ್ಟು ಪದಕಗಳ ಸಂಖ್ಯೆ ೧೫ಕ್ಕೆ ಏರಿಕೆಯಾಗಿದೆ.

__________ ಮುಕ್ತಾಯ __________